**ಸಾಕ್ಷಿಯು ದಿನಾಂಕಃ** 07-01-2026 **ರಂದು ವಿಚಾರಣೆಗಾಗಿ ಹಾಜರಾಗಿದ್ದು ಅವರಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಜಿ. ವಿ. ಪಿ ವಕೀಲರಿಂದ**

ನಾನು ಈಗಾಗಲೇ ನನ್ನ ಪ್ರಮಾಣೀಕೃತ ಹೇಳಿಕೆಯನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿನ ಅಂಶಗಳು ಸತ್ಯದಿಂದ ಕೂಡಿರುತ್ತವೆ. ಅದರಲ್ಲಿನ ಸಹಿ ನನ್ನದೇ ಆಗಿರುತ್ತದೆ.

ದಿಃ **31-10-2022, 03-11-2022, 14-11-2022** ಮತ್ತು **17-11-2022** ರ **4** ಚೆಕ್ ಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿಃ **1** ರಿಂದ **4** ಎಂದು ಗುರುತಿಸಲಾಯಿತು. ದಿಃ **13-12-2022** ರ **4** ಬ್ಯಾಂಕಿನ ಹಿಂಬರಹಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿಃ **5** ರಿಂದ **8** ಎಂದು ಗುರುತಿಸಲಾಯಿತು. ದಿಃ **29-12-2022** ರಂದು ಆರೋಪಿಗೆ ನೀಡಿರುವ ಲೀಗಲ್ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ.- **9** ಎಂದು ಗುರುತಿಸಲಾಯಿತು. ಎರಡು ಅಂಚೆ ರಸೀದಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿ.ಪಿ.- **10** ಮತ್ತು **11** ಎಂದು ಗುರುತಿಸಲಾಯಿತು. ಅಂಚೆ ಸ್ವೀಕೃತ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿಃ **12** ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಆರೋಪಿ ಪರ ಶ್ರೀ ಎ.ಎಂ.ಪಿ ವಕೀಲರಿಂದಃ**

ಆರೋಪಿ ಪರ ವಕೀಲರು ಸಮಯ ಕೋರಿದ್ದು, ಮುಂದೂಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.